**ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ**
**ನ್ಯಾಯಾಲಯ ಯಾದಗಿರಿ.**

**ಉಪಸ್ಥಿತರುಃ- ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 601/2025**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಸೈದಾಪೂರ ಪೊಲೀಸ್ ಠಾಣೆ**

**// ವಿರುದ್ದ //**

**ಆರೋಪಿ ಃ ಮಲ್ಲಿಕಾರ್ಜುನ**

**ದೋಷಾರೋಪಣೆ**

ನಾನು **ಶ್ರೀ ರಾಹುಲ ರಾವ್, ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ. ಆರೋಪಿಯಾದ**

| | |
|---|---|
| ಆರೋಪಿ. | ಮಲ್ಲಿಕಾರ್ಜುನ ತಂದೆ ಯಂಕಪ್ಪ ಕಲಾಲ್<br>ವಃ 25 ವರ್ಷ,<br>ಉಃ ಗೊಂದಡಿಗಿ ಗ್ರಾಮ ,<br>ತಾಃ ಮತ್ತು ಜಿಃ ಯಾದಗಿರಿ. |

**ಆದ ನಿನ್ನ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 14-12-2024 ರಂದು ಸೈದಾಪೂರ ಪೋಲಿಸ್ ಠಾಣೆಯ ಹದ್ದಿಯಲ್ಲಿ ಬರುವ ಗೊಂದಡಗಿ ಗ್ರಾಮದ ತನ್ನ ಮನೆಯ ಮುಂದಿನ ಸಾರ್ವಜನಿಕ ರಸ್ತೆ ಪಕ್ಕಕ್ಕೆ ಆರೋಪಿಯಾದ ನೀನು 25. ಲೀಟರ ಕಲಬೆರಿಕೆ ಸೇಂಧಿಯನ್ನು ಸಂಗ್ರಹಿಸಿ ಇಟ್ಟಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

2. ಎರಡನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು 1250/- ರೂಪಾಯಿ ನಗದು ಹಣ, ಸರ್ಕಾರದಿಂದ ಯಾವುದೇ ಪರವಾನಿಗೆ ಪಡೆಯದೇ ಅನಧಿಕೃತವಾಗಿ ಸಾರ್ವಜನಿಕರಿಗೆ ಕುಡಿಯಲು ಮಾರಾಟ ಮಾಡುತ್ತಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

3. ಮೂರನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಗೊಂದಡಗಿ ಗ್ರಾಮದ ತನ್ನ ಮನೆಯ ಮುಂದಿನ ಸಾರ್ವಜನಿಕ ರಸ್ತೆ ಪಕ್ಕಕ್ಕೆ ಸಿಂದಿ ಮಾರಾಟ ನಿಷೇಧ ಇದ್ದದ್ದು ಗೊತ್ತಿದ್ದರು ಸಹ ವಿಷಕಾರಕ ಸಿಂದಿಯನ್ನು ಅಕ್ರಮವಾಗಿ ಮಾನವನು ಸೇವಿಸಿದರೆ ಜೀವಕ್ಕೆ ಹಾನಿಯುಂಟಾಗುವ ಹೆಂಡ ಮಾರಾಟ ಮಾಡುತ್ತಿದ್ದು, ಈ ಮೂಲಕ ನೀನು ಭಾ. ದಂ. ಸಂ.ಕಲಂ. 286, ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

4. ನಾಲ್ಕನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಗೊಂದಡಗಿ ಗ್ರಾಮದ ತನ್ನ ಮನೆಯ ಮುಂದಿನ ಸಾರ್ವಜನಿಕ ರಸ್ತೆ ಪಕ್ಕಕ್ಕೆ ಸಿಂದಿ ಮಾರಾಟ ನಿಷೇಧ ಇದ್ದದ್ದು ಗೊತ್ತಿದ್ದರು ಸಹ ವಿಷಕಾರಕ ಸಿಂದಿಯನ್ನು ಮಾರಾಟ ಮಾಡಲು ಇಟ್ಟಿದ್ದು, ಈ ಮೂಲಕ ನೀನು ಭಾ. ದಂ. ಸಂ.ಕಲಂ. 275 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 17-10-2025**
**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**